ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ಕೋವಿಡ್ ಸಂಕಷ್ಟದ ಪರಿಸ್ಥಿತಿಯಲ್ಲೂ ಸಂಪೂರ್ಣ ಫೀ ಪಾವತಿಸುವಂತೆ ಖಾಸಗಿ ಶಿಕ್ಷಣ ಸಂಸ್ಥೆಗಳು ಒತ್ತಾಯಿಸುತ್ತಿರುವ ಕುರಿತು.

ಶ್ರೀಮತಿ ಎಸ್.ವೀಣಾಅಚ್ಚಯ್ಯ(ವಿಧಾನಸಭೆಯಿಂದಚುನಾಯಿತರಾದವರು):-

143 (126) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳು 2020-21ನೇ ಶೈಕ್ಷಣಿಕ ವರ್ಷಕ್ಕೆ ಸಂಬಂಧಿಸಿದಂತೆ, ವಿದ್ಯಾರ್ಥಿಗಳ ಸಂಪೂರ್ಣ ಫೀ ಪಾವತಿಸಲೇಬೇಕು ಎಂದು ಕೋವಿಡ್ ಸಂಕಷ್ಟದ ಪರಿಸ್ಥಿತಿಯಲ್ಲೂ ಪೋಷಕರಿಗೆ ಒತ್ತಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಶಿಕ್ಷಣ ಸಂಸ್ಥೆಗಳು ಆನ್‌ಲೈನ್ ತರಗತಿಗಳನ್ನು ನಡೆಸಿರುವುದನ್ನು ಬಿಟ್ಟರೆ, ಈ ಹಿಂದಿನ ವರ್ಷಗಳಲ್ಲಿ ಒದಗಿಸಿದ ಬಹುತೇಕ ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ನೀಡಿರುವುದಿಲ್ಲ ಎಂಬ ಮಾಹಿತಿ ಸರ್ಕಾರದ ಗಮನದಲ್ಲಿದೆಯೇ;

(ಇ) ಇದ್ದಲ್ಲಿ, ಈ ರೀತಿ ಅವೈಜ್ಞಾನಿಕವಾಗಿ ವಿದ್ಯಾರ್ಥಿಗಳ ಪೂರ್ಣ ಫೀ ಪಾವತಿಸಲೇಬೇಕು ಎಂದು ಪಟ್ಟು ಹಿಡಿದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ;

(ಈ) ಕೋವಿಡ್ ಸಂಕಷ್ಟದ ಪರಿಸ್ಥಿತಿಯಲ್ಲೂ ವಿದ್ಯಾರ್ಥಿಗಳ ಪೂರ್ಣ ಫೀ ಪಾವತಿಸಲೇಬೇಕು ಎಂಬ ಖಾಸಗಿ ಶಿಕ್ಷಣ ಸಂಸ್ಥೆಗಳ ನಿಲುವಿಗೆ ಸರ್ಕಾರದ ಸ್ಪಷ್ಟ ನಿಲುವೇನು ?